ಶಿವಮೊಗ್ಗ ನಗರದಲ್ಲಿ ಘೋಷಿತ ಕೊಳಚೆ ಪ್ರದೇಶಗಳು

18 (4) : ಶ್ರೀ ಈಶ್ವರಪ್ಪ ಕೆ.ಎಸ್. (ಶಿವಮೊಗ್ಗ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ನಗರದಲ್ಲಿ ಘೋಷಿತ ಕೊಳಚೆ ಪ್ರದೇಶಗಳ ಸಂಖ್ಯೆ ಎಷ್ಟು;

ಆ) ಘೋಷಿಸಲು ಬಾಕಿ ಇರುವ ಕೊಳಚೆ ಪ್ರದೇಶಗಳೆಷ್ಟು;

ಇ) ಕೊಳಚೆ ಪ್ರದೇಶಾಭಿವೃದ್ಧಿಗಾಗಿ ಯಾವುದಾದರು ಯೋಜನೆಯಲ್ಲಿ ಹಣ ಮೀಸಲಿಡಲಾಗಿದೆಯೇ; ಹಾಗೂ ಅದರಲ್ಲಿ ಎಷ್ಟು ಹಣ ಖರ್ಚಾಗಿದೆ; (ವಿವರ ನೀಡುವುದು)?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಯವರು)

ಅ) ಶಿವಮೊಗ್ಗ ನಗರ ಸಭಾ ವ್ಯಾಪ್ತಿಯಲ್ಲಿ ಮಂಡಳಿಯ ಕಾಯಿದೆಯಡಿ ಅಂತಿಮವಾಗಿ ಘೋಷಿಸಿರುವ ಒಟ್ಟು ಕೊಳಚೆ ಪ್ರದೇಶಗಳು 37

ಆ) ಶಿವಮೊಗ್ಗ ನಗರದಲ್ಲಿ ಘೋಷಿಸಲು ಬಾಕಿ ಇರುವ ಕೊಳಚೆ ಪ್ರದೇಶಗಳ ಸಂಖ್ಯೆ 3.

ಇ) ನಿರ್ಮಲ ಜ್ಯೋತಿ ಯೋಜನೆಯಡಿ 2002–03 ಮತ್ತು 2003–04ರ ಸಾಲಿನ ಹಂತ–1 ರಲ್ಲಿ ಶಿವಮೊಗ್ಗ ನಗರದ 9 ಕೊಳಚೆ ಪ್ರದೇಶಗಳ ಅಭಿವೃದ್ಧಿಗಾಗಿ ರೂ. 211.29 ಲಕ್ಷ ನಿಗಧಿಪಡಿಸಿದ್ದು, ಈ ಹಣದಲ್ಲಿ ಜೂನ್ 2004 ರ ಅಂತ್ಯದವರೆಗೆ 162.88 ಲಕ್ಷ ರೂ.ಗಳನ್ನು ಖರ್ಚು ಮಾಡಿ ರಸ್ತೆ, ನೆಲ ಹಾಸು, ಅಡ್ಡಮೋರಿ, ಚರಂಡಿ, ಕುಡಿಯುವ ನೀರಿನ ವ್ಯವಸ್ಥೆ, ನೈರ್ಮಲೀಕರಣ, ವಿದ್ಯುದೀಕರಣ ಮತ್ತು ತಡೆಗೋಡೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಕಾಮಗಾರಿಗಳು ಮುಗಿಯುವ ಹಂತದಲ್ಲಿವೆ.

ಇದೇ ಯೋಜನೆಯಡಿ 2004–05ನೇ ಸಾಲಿನ 2ನೇ ಹಂತದಲ್ಲಿ 479.60 ಲಕ್ಷ ರೂ.ಗಳ ಅಂದಾಜು ವೆಚ್ಚದಲ್ಲಿ 19 ಕೊಳಚೆ ಪ್ರದೇಶಗಳಲ್ಲಿ ರಸ್ತೆ, ಕಾಂಕ್ರೀಟ್ ನೆಲಹಾಸು, ಅಡ್ಡಮೋರಿ, ಚರಂಡಿ, ಕುಡಿಯುವ ನೀರಿನ ವ್ಯವಸ್ಥೆ, ಹೊರ ವಿದ್ಯುದೀಕರಣ ಮುಂತಾದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಉದ್ದೇಶಿಸಿದ್ದು, ಸದರಿ ಕಾಮಗಾರಿಗಳಿಗೆ ಟೆಂಡರ್ ಕರೆಯುವ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಶಿವಮೊಗ್ಗ ನಗರದ 5 ಕೊಳಚೆ ಪ್ರದೇಶಗಳಲ್ಲಿ ವಾಂಬೆ ಯೋಜನೆಯಡಿ ಹಂತ–1, ಹಂತ–2 ಮತ್ತು ಹಂತ–3 ರಡಿ ಒಟ್ಟು ರೂ. 119.20 ಲಕ್ಷ ಅಂದಾಜಿನಲ್ಲಿ 298 ಮನೆಗಳನ್ನು ನಿರ್ಮಿಸುವ ಗುರಿ ಹೊಂದಿದ್ದು, ಈ ಪೈಕಿ ರೂ. 88.00 ಲಕ್ಷಗಳನ್ನು ಖರ್ಚು ಮಾಡಿ 220 ಮನೆಗಳನ್ನು ನಿರ್ಮಿಸಲಾಗಿದೆ. ಉಳಿದ ಮನೆಗಳು ವಿವಿದ ಹಂತದಲ್ಲಿ ಪ್ರಗತಿಯಲ್ಲಿವೆ.

ಕೊಡಚಾದ್ರಿ ಪರ್ವತ ಶ್ರೇಣಿಯಲ್ಲಿ ಅನಧಿಕೃತ ಗಣಿಗಾರಿಕೆ ನಡೆಯುತ್ತಿರುವ ಬಗ್ಗೆ

20 (162) : ಶ್ರೀ ಗೋಪಾಲಕೃಷ್ಣ ಬೇಲೂರು ಬಿ.ಕೆ. (ಸಾಗರ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪಶ್ಚಿಮ ಘಟ್ಟ ಪ್ರದೇಶದ ಕೊಡಚಾದ್ರಿ ಪರ್ವತ ಶ್ರೇಣಿಯಲ್ಲಿ ಅನಧಿಕೃತ ಗಣಿ ಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಇದರಿಂದ ಎಷ್ಟು ಎಕರೆ ಅರಣ್ಯ ನಾಶವಾಗಿದೆ;

ಇ) ಇದನ್ನು ಯಾವ ಖಾಸಗೀ ಗಣಿ ಕಂಪೆನಿಗೆ ವಹಿಸಲಾಗಿದೆ;

ಈ) ಇದಕ್ಕೆ ಅನುಮತಿ ಪಡೆಯಲಾಗಿದೆಯೇ; ಇಲಾಖೆ ಅನುಮತಿ ನೀಡಿದೆಯೇ;

ಉ) ನೀಡಿದ್ದಲ್ಲಿ, ಕಾಟ್ ಸ್ಟಾಟ್ ಅನ್ವಯ ಅರಣ್ಯ ಸಂರಕ್ಷಣಾ ಕಾಯಿದೆ, ವನ್ಯಜೀವಿ ಸಂರಕ್ಷಣಾ ಕಾಯಿದೆ, ಜೀವ ವೈವಿಧ್ಯ ಸಂರಕ್ಷಣಾ ಕಾಯಿದೆ, ಪರಿಸರ ಕಾಯಿದೆ, ಮಾಲಿನ್ಯ ಕಾಯಿದೆಗೆ ವಿರುದ್ಧವಾದಂತಾಗುವುದಿಲ್ಲವೇ:

ಊ) ಈ ಬಗ್ಗೆ ಸರ್ಕಾರದ ನಿಲುವೇನು (ವಿವರ ನೀಡುವುದು)?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಯವರು)

ಅ) ಬಂದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಶ್ರೀ ಬಿ.ಆರ್. ಯೋಗೀಂದ್ರನಾಥ್ ಸಿಂಗ್‌ರವರಿಗೆ ದಿನಾಂಕ: 28.4.1965 ರಲ್ಲಿ ಗಣಿಗುತ್ತಿಗೆ ಮಂಜೂರು ಮಾಡಲಾಗಿದೆ.

ಈ) ಹೌದು.

ಉ) ಇಲ್ಲ.

ಊ) ಇತ್ತೀಚೆಗೆ ಈ ಪ್ರದೇಶದಲ್ಲಿ ನಡೆಯುತ್ತಿದ್ದ ಗಣಿ ಗಾರಿಕೆಗೆ ವಿರೋಧ ವ್ಯಕ್ತವಾಗಿದ್ದು, ಜಿಲ್ಲಾಧಿಕಾರಿಯವರ ಅಭಿಪ್ರಾಯ ಹಾಗೂ ಅರಣ್ಯ ಇಲಾಖೆಯ ಅಭಿಪ್ರಾಯದ ಮೇರೆಗೆ ಗಣಿ ಗುತ್ತಿಗೆಯನ್ನು ನವೀಕರಿಸದಿರಲು ಕ್ರಮ ತೆಗೆದುಕೊಂಡು ನಿಯಮದಂತೆ ನೋಟೀಸ್ ಜಾರಿ ಮಾಡಲಾಗಿದೆ.

ಶೃಂಗೇರಿ ಕ್ಷೇತ್ರ ವ್ಯಾಪ್ತಿಯಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

22 (24) : ಶ್ರೀ ಜೀವರಾಜ್ ಡಿ.ಎನ್. (ಶೃಂಗೇರಿ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶೃಂಗೇರಿ, ಕೊಪ್ಪ, ಎನ್.ಆರ್. ಪುರ ತಾಲ್ಲೂಕುಗಳಲ್ಲಿರುವ ಪ್ರಾಥಮಿಕ, ಪ್ರೌಢಶಾಲಾ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು; ಹಾಗೂ ಕಳೆದ ಸಾಲಿನಲ್ಲಿ ಖಾಲಿ ಇದ್ದ ಹುದ್ದೆಗಳ ಸಂಖ್ಯೆ ಎಷ್ಟು;

ಆ) ಪ್ರಸಕ್ತ ಸಾಲಿನಲ್ಲಿ ಸದರಿ ತಾಲ್ಲೂಕುಗಳಿಂದ ಹೊರಗೆ ವರ್ಗಾವಣೆಗೊಂಡ ಶಿಕ್ಷಕರೆಷ್ಟು, ಹಾಗೂ ಈ ಮೂರು ತಾಲ್ಲೂಕುಗಳಿಗೆ ಈ ಸಾಲಿನಲ್ಲಿ ಬಂದ ಶಿಕ್ಷಕರ ಸಂಖ್ಯೆ ಎಷ್ಟು;

ಇ) ಗ್ರಾಮೀಣ ಪ್ರದೇಶದಿಂದ ಕೂಡಿದ ಈ ತಾಲ್ಲೂಕುಗಳಲ್ಲಿ ಶಿಕ್ಷಕರ ಹುದ್ದೆಗಳನ್ನು ತುಂಬದಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಲ್ಲವೇ;

ಈ) ಹಾಗಿದ್ದಲ್ಲಿ, ಕಾಲಮಿತಿಯೊಳಗೆ ಈ ಖಾಲಿ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಯವರು)

ಅ) ಶೃಂಗೇರಿ, ಕೊಪ್ಪ, ಎನ್.ಆರ್.ಪುರ ತಾಲ್ಲೂಕುಗಳಲ್ಲಿರುವ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳ ಸಂಖ್ಯೆ ಒಟ್ಟು: 1219, ಪ್ರೌಢಶಾಲಾ ಶಿಕ್ಷಕರ ಹುದ್ದೆಗಳ ಸಂಖ್ಯೆ ಒಟ್ಟು: 249.

ಕಳೆದ ಸಾಲಿನಲ್ಲಿ ಪ್ರಾಥಮಿಕ ಶಾಲೆಯಲ್ಲಿನ ಖಾಲಿ ಹುದ್ದೆಗಳ ಸಂಖ್ಯೆ: 240. ಪ್ರೌಢಶಾಲೆಗಳಲ್ಲಿ ಖಾಲಿ ಇದ್ದ ಹುದ್ದೆಗಳ ಸಂಖ್ಯೆ: 30.

ಆ) ಪ್ರಸಕ್ತ ಸಾಲಿನಲ್ಲಿ ಪ್ರಾಥಮಿಕ ಶಾಲೆಗಳಿಂದ ಹೊರಗೆ ವರ್ಗಾವಣೆಗೊಂಡ ಶಿಕ್ಷಕರ ಸಂಖ್ಯೆ ಮೂರು ತಾಲ್ಲೂಕಿನಿಂದ ಒಟ್ಟು: 21 ಆಗಿರುತ್ತದೆ.